# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ ಇಂದಿರಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ ಕುರಿತು – ಅಂತಿಮ ಆದೇಶ ಹೊರಡಿಸುವ ಬಗ್ಗೆ– ಆದೇಶ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/157/ಗ್ರಾಪಂಕಾ/2017, ದಿನಾಂಕ: 28-03-2017.
2) ಅಪರ ನಿಬಂಧಕರು, ವಿಚಾರಣೆಗಳು-11, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪ ಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-2/DE-535/2017/ARE-11, ದಿನಾಂಕ:04-01-2019.
3) ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: Uplok-2/DE/535/2017/ARE-11, ದಿನಾಂಕ: 07-01-2019.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀಮತಿ ಇಂದಿರಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ಹಾಗೂ ಕೆ.ಸಿ.ಎಸ್.ಆರ್. ನಿಯಮಗಳು, 214(2)(ಬಿ) ರನ್ವಯ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು-11, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಆರೋಪದ ಮೇಲೆ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಆಪಾದಿತ ನೌಕರರಾದ ಶ್ರೀಮತಿ ಇಂದಿರಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧದ ಆರೋಪಗಳು ಸಾಬೀತಾಗಿರುವುದಿಲ್ಲವೆಂದು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ವರದಿಯಲ್ಲಿ ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಆರೋಪಿತ ಸರ್ಕಾರಿ ನೌಕರರ ವಿರುದ್ಧದ ಆರೋಪಗಳು ಸಾಬೀತಾಗದಿರುವ ಕಾರಣ ವಿಚಾರಣಾ ಪ್ರಕ್ರಿಯೆಯನ್ನು ಕೈಬಿಡಲಾಗಿದೆ ಎಂದು ತಿಳಿಸಿರುವುದರಿಂದ ಮೇಲೆ ಓದಲಾದ ಕ್ರಮಾಂಕ (3)ರಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿದ್ದಾರೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/43/ಗ್ರಾಪಂಕಾ/2019, ಬೆಂಗಳೂರು, ದಿನಾಂಕ: 21-03-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು, ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಶಿಫಾರಸ್ಸಿನ ಅನ್ವಯ ಶ್ರೀಮತಿ ಇಂದಿರಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧದ ಆರೋಪಗಳು ಸಾಬೀತಾಗದಿರುವುದರಿಂದ ಆಪಾದಿತ ನೌಕರರ ವಿರುದ್ಧದ ವಿಚಾರಣೆಯನ್ನು ಕೈಬಿಟ್ಟು ದೋಷಮುಕ್ತರನ್ನಾಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

21/3

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಅಪರ ನಿಬಂಧಕರು, ವಿಚಾರಣೆಗಳು-11, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಜಿಲ್ಲೆ.
7. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಕೋಲಾರ, ಕೋಲಾರ ಜಿಲ್ಲೆ.
8. ಶ್ರೀಮತಿ ಇಂದಿರಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ.
9. ಗಣಕ ಕೋಶ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.